# ಕುವೆಂಪು ವಿಶ್ವವಿದ್ಯಾಲಯ

# ವಿದ್ಯಾವಿಷಯಕ ಪರಿಷತ್‌ನ ಆನ್‌ಲೈನ್ ವಿಶೇಷ ಸಭೆಯ ನಡಾವಳಿಗಳು

## ಸಭಾ ದಿನಾಂಕ : 19-09-2022

ಪ್ರಾಧಿಕಾರಗಳ ವಿಭಾಗ

ಜ್ಞಾನ ಸಹ್ಯಾದ್ರಿ, ಶಂಕರಘಟ್ಟ - 577 451

ಶಿವಮೊಗ್ಗ ಜಿಲ್ಲೆ.

ಫ್ಯಾಕ್ಸ್: 08282-256262 ☎08282-256148 (ಪ್ರಾಧಿಕಾರಗಳ ವಿಭಾಗ)
ಇ-ಮೇಲ್: drsyndicateku@gmail.com ವೆಬ್‌ಸೈಟ್:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ- 577 451

ಸಂಖ್ಯೆ: ಕುವಿ:ಯುವಟಿ-1:ವ.ಸಿ.01-22: 239:2022-23 ದಿನಾಂಕ:06-10-2022

ಮಾನ್ಯರೆ,

ವಿಷಯ: ದಿನಾಂಕ:19-09-2022ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಆನ್‌ಲೈನ್ ವಿಶೇಷ ಸಭೆಯ ನಡಾವಳಿಗಳು.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ – 2000ರ ಪ್ರಕರಣ – 31(xviii) ರ ಪ್ರಕಾರ ರಚಿಸಲಾಗಿರುವ/ ಅನುಸರಿಸಲಾಗುತ್ತಿರುವ ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ- 17ರನ್ವಯ ದಿನಾಂಕ:19-09-2022ರಂದು ವಿಶ್ವವಿದ್ಯಾಲಯದ **"ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ"**ದಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಆನ್‌ಲೈನ್ ವಿಶೇಷ ಸಭೆಯ ನಡಾವಳಿಯನ್ನು ಈ ಮೂಲಕ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ-17ರ ಕಂಡಿಕೆ (2) ರ ಪ್ರಕಾರ ಸದರಿ ನಡಾವಳಿಗಳನ್ನು ಕಳುಹಿಸಿದ 21 ದಿನಗಳೊಳಗೆ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ತಮ್ಮ ವಿಶ್ವಾಸಿ,

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಗೆ,

ವಿದ್ಯಾವಿಷಯಕ ಪರಿಷತ್ತಿನ ಎಲ್ಲಾ ಸದಸ್ಯರುಗಳಿಗೆ.

ಪ್ರತಿಗಳು:-

1) ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯಗಳು ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು.
3) ಆಯುಕ್ತರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
4) ಕುಲಸಚಿವರು(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6) ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
7) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8) ನಿರ್ದೇಶಕರು,ಐ.ಕ್ಯೂ.ಎ.ಸಿ./ಪಿ.ಎಂ.ಇ/ ಸಿ.ಡಿ.ಸಿ/ ಶಾರೀರಿಕ ಶಿಕ್ಷಣ/ ವಿದ್ಯಾರ್ಥಿ ಕ್ಷೇಮಪಾಲನ/ ಪ್ರಸಾರಾಂಗ/ ದೂರಶಿಕ್ಷಣ ನಿರ್ದೇಶನಾಲಯ ವಿಭಾಗ, ಮಹಿಳಾ ಅಧ್ಯಯನ ಕೇಂದ್ರ, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9) ಎಲ್ಲಾ ಅಧ್ಯಕ್ಷರು / ಸಂಚಾಲಕರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ ಕಡೂರು./ ಚಿಕ್ಕಮಗಳೂರು
10) ಎಲ್ಲಾ ಉಪಕುಲಸಚಿವರು./ಸಹಾಯಕ ಕುಲಸಚಿವರುಗಳು/ ಅಧೀಕ್ಷಕರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು.
11) ~~ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜು / ಸಹ್ಯಾದ್ರಿ ವಿಜ್ಞಾನ ಕಾಲೇಜು/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು,~~ ಶಿವಮೊಗ್ಗ ಶಿವಮೊಗ್ಗ.
12) ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ, ಬಿ.ಹೆಚ್ ರಸ್ತೆ ಕಡೂರು.
13) ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ ಕಾಲೇಜು ಕಟ್ಟಡ, ಚಿಕ್ಕಮಗಳೂರು, ಕುವೆಂಪು ವಿಶ್ವವಿದ್ಯಾಲಯ
14) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
15) ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
16) ಕಾರ್ಯಪಾಲಕ ಅಭಿಯಂತರರು, ವಿಶ್ವವಿದ್ಯಾಲಯ ಇಂಜಿನಿಯರಿಂಗ್ ವಿಭಾಗ, ವಿಶ್ವವಿದ್ಯಾಲಯ, ಶಂಕರಘಟ್ಟ.
17) ವಿದ್ಯಾರ್ಥಿಗಳ ಉತ್ತೇಜನ ಸೇವಾ ಕೇಂದ್ರ, ವಿದ್ಯಾರ್ಥಿಗಳ ಸೌಲಭ್ಯ ಸಮುಚ್ಛಯ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ.
18) ಆಪ್ತಕಾರ್ಯಾಲಯ ಕುಲಪತಿಗಳು: ಕುಲಸಚಿವರು: ಕುಲಸಚಿವರು(ಮೌಲ್ಯಮಾಪನ):ಹಣಕಾಸು ಅಧಿಕಾರಿಗಳು. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:19-09-2022 ರಂದು ಸೋಮವಾರ ಅಪರಾಹ್ನ:03.00 ಗಂಟೆಗೆ ವಿಶ್ವವಿದ್ಯಾಲಯದ "ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ"ದಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಆನ್‌ಲೈನ್ ವಿಶೇಷ ಸಭೆಯ ನಡಾವಳಿಗಳು.

ಹಾಜರಿದ್ದ ಸದಸ್ಯರು :

| | | |
|---|---|---|
| 1. | ಪ್ರೊ. ಬಿ.ಪಿ ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀಮತಿ ಅನುರಾಧ ಜಿ. ಕೆ.ಎ.ಎಸ್.(ಸೂಪರ್ ಟೈಂ ಸ್ಕೇಲ್), ಕುಲಸಚಿವರು | ಸದಸ್ಯ ಕಾರ್ಯದರ್ಶಿ |
| 3. | ಪ್ರೊ. ನವೀನ್ ಕುಮಾರ್ ಎಸ್.ಕೆ. ಕುಲಸಚಿವರು(ಮೌಲ್ಯಮಾಪನ) | ಸದಸ್ಯರು |
| 4. | ಶ್ರೀ ರಾಜಶೇಖರ್ ಹೆಬ್ಬಾರ್.ಸಿ. ಕಾಲೇಜು ಶಿಕ್ಷಣ ಇಲಾಖೆ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಶ್ರೀ ವಿನಯ ಕುಮಾರ್ ಶೆಟ್ಟಿ ಪ್ರಾಂಶುಪಾಲರು | ಸದಸ್ಯರು |
| 6. | ಡಾ. ಎ.ಟಿ. ಪದ್ಮೇಗೌಡ ಡಿ.ವಿ.ಎಸ್. ಕಾಲೇಜು ಶಿವಮೊಗ್ಗ. | ಸದಸ್ಯರು |
| 7. | ಡಾ. ವಿಷ್ಣುಮೂರ್ತಿ ಕೆ.ಎ. ಪ್ರಾಂಶುಪಾಲರು | ಸದಸ್ಯರು |
| 8. | ಶ್ರೀಮತಿ ಭಾರತಿ ಪ್ರಾಂಶುಪಾಲರು | ಸದಸ್ಯರು |
| 9. | ಶ್ರೀ ನಟೇಶ ಎಸ್.ಎಂ. ಪ್ರಾಂಶುಪಾಲರು | ಸದಸ್ಯರು |
| 10. | ಶ್ರೀ ಬಿ.ಸಿ. ಬಸವರಾಜಪ್ಪ ಪ್ರಾಂಶುಪಾಲರು | ಸದಸ್ಯರು |
| 11. | ಶ್ರೀ ಮಹಾಲಿಂಗಪ್ಪ ಈ. ಪ್ರಾಂಶುಪಾಲರು | ಸದಸ್ಯರು |
| 12. | ಶ್ರೀ ಹೆಚ್.ಎಂ. ಸುರೇಶ್ ಪ್ರಾಂಶುಪಾಲರು | ಸದಸ್ಯರು |
| 13. | ಡಾ. ಎಂ. ಸ್ವಾಮಿ ಪ್ರಾಂಶುಪಾಲರು | ಸದಸ್ಯರು |
| 14. | ಶ್ರೀ ಚಂದ್ರಶೇಖರ ಎಸ್. | ಸದಸ್ಯರು |
| 15. | ಶ್ರೀ ಎಂ.ಎ. ರಮೇಶ್ ಹೆಗಡೆ | ಸದಸ್ಯರು |
| 16. | ಶ್ರೀಮತಿ ಗೀತಾಂಜಲಿ | ಸದಸ್ಯರು |
| 17. | ಶ್ರೀ ಕುಮಾರೇಗೌಡ | ಸದಸ್ಯರು |
| 18. | ಶ್ರೀ ಮನೋಜ್ ಸಲ್ಡಾನಾ | ಸದಸ್ಯರು |
| 19. | ಡಾ. ರವಿಕಿರಣ ಹೆಚ್.ಕೆ. | ಸದಸ್ಯರು |
| 20. | ಶ್ರೀ ಶಿವಣ್ಣ ಪಿ. | ಸದಸ್ಯರು |
| 21. | ಡಾ. ನರಸಿಂಹಮೂರ್ತಿ ಎಸ್.ಕೆ., ಪ್ರಾಧ್ಯಾಪಕರು | ಸದಸ್ಯರು |
| 22. | ಡಾ. ಪದ್ಮಮ್ಮ ಎಸ್. ಪ್ರಾಧ್ಯಾಪಕರು | ಸದಸ್ಯರು |
| 23. | ಡಾ. ಕೆ.ಎಂ. ಮಹಾದೇವನ್, ಪ್ರಾಧ್ಯಾಪಕರು | ಸದಸ್ಯರು |
| 24. | ಡಾ. ಆರ್ಶೋಟ ನಾಯಕ ವೈ., ಪ್ರಾಧ್ಯಾಪಕರು | ಸದಸ್ಯರು |
| 25. | ಪ್ರೊ. ರಿಯಾಜ್ ಮಹಮೂದ್ ಡೀನರು., ವಿಜ್ಞಾನ ನಿಕಾಯ | ಸದಸ್ಯರು |
| 26. | ಪ್ರೊ. ವೆಂಕಟೇಶ್ ಎಸ್, ಡೀನರು., ವಾಣಿಜ್ಯ ನಿಕಾಯ | ಸದಸ್ಯರು |
| 27. | ಡಾ. ಆರ್.ಹೆಚ್. ವಾಲ್ಮೀಕಿ ಗ್ರಂಥಪಾಲಕರು, (ಪ್ರಭಾರ) | ಸದಸ್ಯರು |
| 28. | ಪ್ರೊ. ವೈ.ಎಲ್. ರಾಮಚಂದ್ರ ನಿರ್ದೇಶಕರು ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ | ಸದಸ್ಯರು |
| 29. | ಡಾ. ನಾಗರಾಜ. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, | ಸದಸ್ಯರು |
| 30. | ಡಾ. ಎನ್.ಡಿ. ವಿರೂಪಾಕ್ಷ (ಪ್ರಭಾರ), ನಿರ್ದೇಶಕರು, ದೈಹಿಕ ಶಿಕ್ಷಣ | ಸದಸ್ಯರು |
| 31. | ಶ್ರೀ ಎಸ್. ರಾಮಕೃಷ್ಣ , ಹಣಕಾಸು ಅಧಿಕಾರಿಗಳು | ಸದಸ್ಯರು |
| 32. | ಪ್ರೊ. ನವೀನ್ ಕುಮಾರ್. ಎಸ್.ಕೆ. ನಿರ್ದೇಶಕರು, ದೂರ ಶಿಕ್ಷಣ ನಿರ್ದೇಶನಾಲಯ | ವಿಶೇಷ ಆಹ್ವಾನಿತರು |

ಗೈರು ಹಾಜರಾದ ಸದಸ್ಯರು :

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| 2. | ಶ್ರೀ ಎಸ್. ರುದ್ರೇಗೌಡ, ವಿಧಾನ ಪರಿಷತ್ ಸದಸ್ಯರು, ಶಿವಮೊಗ್ಗ | ಸದಸ್ಯರು |
| 3. | ಶ್ರೀಮತಿ ಮಮತಾ ಸಾಲಿ | ಸದಸ್ಯರು |
| 4. | ಶ್ರೀಮತಿ ಸೀಮಾ ಕೌಸರ್ ಹೆಚ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೊರಬ | ಸದಸ್ಯರು |
| 5. | ಶ್ರೀಮತಿ ಎಸ್.ಬಿ. ಅನುಪಮ | ಸದಸ್ಯರು |
| 6. | ಡಾ. ಎಸ್. ಚಂದ್ರಶೇಖರ್, ಪ್ರಾಧ್ಯಾಪಕರು | ಸದಸ್ಯರು |
| 7. | ಪ್ರೊ. ಯೋಗೀಶ್ ಎಸ್.ಎನ್.. ಡೀನರು.. ಕಲಾನಿಕಾಯ | ಸದಸ್ಯರು |
| 8. | ಡಾ. ಗೀತಾ ಸಿ., ಡೀನರು., ಶಿಕ್ಷಣ ನಿಕಾಯ | ಸದಸ್ಯರು |
| 9. | ಡಾ. ಪ್ರಶಾಂತ ನಾಯಕ ಜಿ. ನಿರ್ದೇಶಕರು. ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ | ವಿಶೇಷ ಆಹ್ವಾನಿತರು |
| 10. | ಪ್ರೊ. ವೈ.ಎಲ್. ಕೃಷ್ಣಮೂರ್ತಿ ನಿರ್ದೇಶಕರು ಐ.ಕ್ಯೂ.ಎ.ಸಿ | ವಿಶೇಷ ಆಹ್ವಾನಿತರು |

## ಪ್ರಾಧಿಕಾರಗಳ ವಿಭಾಗ

2022:ಎಸಿ-2(1):2022 : The Statutes Relating to Appointment and Promotion of Teachers and Other Academic Staff and Measures for the Maintenance of Standards in higher Education in the Kuvempu University as per the UGC Regulations 2018

ಚರ್ಚೆ : ಪ್ರಾರಂಭದಲ್ಲಿ ಆನ್‌ಲೈನ್ ಮೂಲಕ ಸಭೆಗೆ ಆಗಮಿಸಿದ ಎಲ್ಲಾ ಸದಸ್ಯರುಗಳಿಗೆ ಮಾನ್ಯ ಕುಲಸಚಿವರು ಸ್ವಾಗತ ಕೋರಿದರು. ನಂತರ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಕುಲಪತಿಗಳು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ ಅಧ್ಯಾಪಕರ ನೇಮಕಾತಿ ಮತ್ತು ವೃತ್ತಿ ಪದೋನ್ನತಿ ಸಂಬಂಧ ಏಕರೂಪದ ಕರಡು ನಿಯಮಾವಳಿಯನ್ನು ಸಿದ್ಧಪಡಿಸಿದ್ದು, ಸಂಬಂಧಿಸಿದ ಪರಿನಿಯಮವನ್ನು ದಿನಾಂಕ:30-07-2022 ರಂದು ಜರುಗಿದ ಸಿಂಡಿಕೇಟ್ ಸಭೆಯು ಅನುಮೋದಿಸಿದ್ದು, ಈದೀಗ ಪರಿನಿಯಮವನ್ನು ವಿದ್ಯಾವಿಷಯಕ ಪರಿಷತ್ ಅನುಮೋದನೆಗಾಗಿ ಮಂಡಿಸುವುದು ಬಹಳ ಅಗತ್ಯವಾಗಿದೆ ಎಂದು ತಿಳಿಸಿದರು. ಕುವೆಂಪು ವಿಶ್ವವಿದ್ಯಾಲಯ ಸೇರಿದಂತೆ ಬಹುತೇಕ ವಿಶ್ವವಿದ್ಯಾಲಯಗಳಲ್ಲಿ ಹಲವಾರು ವಿಷಯ ಹಾಗೂ ವಿಭಾಗದಲ್ಲಿ ಅಧ್ಯಾಪಕರ ಕೊರತೆ ಇದ್ದು ಈ ಪರಿನಿಯಮವು ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಅನುಮೋದನೆಗೊಂಡು ಜಾರಿಗೊಂಡಲ್ಲಿ ಅಧ್ಯಾಪಕರ ಕೊರತೆ ಎದುರಿಸುತ್ತಿರುವ ವಿಶ್ವವಿದ್ಯಾಲಯಗಳಿಗೆ ಬಹಳ ಅನುಕೂಲವಾಗಲಿದೆ ಎಂದು ಸಭೆಗೆ ತಿಳಿಸಿದರು. ಆದ್ದರಿಂದ ವಿದ್ಯಾವಿಷಯಕ ಪರಿಷತ್ ಸದಸ್ಯರು ಈ ಪರಿನಿಯಮಕ್ಕೆ ಒಪ್ಪಿಗೆ ನೀಡಬೇಕೆಂದು ಸಭೆಯನ್ನು ಕೋರಿದರು.

ನಂತರ ಮಾತನಾಡಿದ ಮಾನ್ಯ ಕುಲಸಚಿವರಾದ ಶ್ರೀಮತಿ ಅನುರಾಧ ಜಿ. ಅವರು ಈ ಪರಿನಿಯಮವನ್ನು ಉನ್ನತ ಶಿಕ್ಷಣ ಪರಿಷತ್ ತಜ್ಞರ ಸಮಿತಿಯಿಂದ ಸಿದ್ಧಪಡಿಸಿ ವಿಶ್ವವಿದ್ಯಾಲಯಗಳ ಅನುಮೋದನೆಗಾಗಿ ಉನ್ನತ ಶಿಕ್ಷಣ ಇಲಾಖೆಯವರು ಕಳುಹಿಸಿಕೊಟ್ಟಿರುತ್ತಾರೆ. ಯು.ಜಿ.ಸಿ. ನಿಯಮಾವಳಿ 2018ರ ಅನ್ವಯ ಈ ಪರಿನಿಯಮವನ್ನು ರಚಿಸಲಾಗಿದ್ದು, ಪರಿನಿಯಮದ ಟೇಬಲ್ 6(B) ಪ್ರಕಾರ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ 50 ಅಂಕಗಳಿಗೆ ಪ್ರವೇಶ ಪರೀಕ್ಷೆಯನ್ನು ನಡೆಸಲು ಹಾಗೂ ಉಳಿದ ಅಂಶಗಳಿಗೆ ಸಂಬಂಧಿಸಿದ ಅಂಕಗಳನ್ನು ಒಳಗೊಂಡಂತೆ ಒಟ್ಟು 112 ಅಂಕಗಳನ್ನು ಈ ನೇಮಕಾತಿ ಪ್ರಕ್ರಿಯೆಯಲ್ಲಿ ನಿಗಧಿಪಡಿಸಲಾಗಿದೆ ಎಂದು ಸಭೆಗೆ ತಿಳಿಸಿದರು. ಈ ಪರಿನಿಯಮವನ್ನು ದಿನಾಂಕ:30-07-2022 ರಂದು ನಡೆದ ಸಿಂಡಿಕೇಟ್ ಸಭೆಯು ಅನುಮೋದಿಸಿದ್ದು, ಉನ್ನತ ಶಿಕ್ಷಣ ಇಲಾಖೆಯವರ ಸೂಚನೆಯಂತೆ ತುರ್ತಾಗಿ ಪರಿನಿಯಮವನ್ನು ಅನುಮೋದಿಸಬೇಕಾಗಿರುವ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ ವಿದ್ಯಾವಿಷಯಕ ಪರಿಷತ್ ಸಭೆಯನ್ನು ಏರ್ಪಡಿಸಿದ್ದು, ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆ ಜೊತೆಗೆ ಹಣಕಾಸು ಸಮಿತಿ ಸಭೆಯ ಅನುಮೋದನೆಗಾಗಿ ಮಂಡಿಸಲಾಗುವುದೆಂದು ಸಭೆಗೆ ತಿಳಿಸಿದರು. ಆದ್ದರಿಂದ ಈ ಪರಿನಿಯಮಕ್ಕೆ ಸಭೆ ತನ್ನ ಅನುಮೋದನೆ ನೀಡಬೇಕೆಂದು ಕೋರಿದರು. ಜೊತೆಗೆ ಸಭೆಯಲ್ಲಿ ಭಾಗವಹಿಸಿದ್ದ ಹಿರಿಯ ಪ್ರಾಧ್ಯಾಪಕರು ಹಾಗೂ ವಿಜ್ಞಾನ ನಿಕಾಯದ ಡೀನರಾದ ಪ್ರೊ. ರಿಯಾಜ್ ಮಹಮೂದ್‌ರವರು ಸಭೆಗೆ ಪರಿನಿಯಮ ಕುರಿತು ಸಂಕ್ಷಿಪ್ತವಾಗಿ ವಿವರಿಸಬೇಕೆಂದು ಕೋರಿದರು.

ನಂತರ ಮಾತನಾಡಿದ ಪ್ರೊ. ರಿಯಾಜ್ ಮಹಮೂದ್‌ರವರು ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಪರಿಷತ್ ತಜ್ಞರ ಸಮಿತಿ ರಚಿಸಿರುವ Statutes for Recruitment and Promotion of Teachers and others ಅನ್ನು ಪರಿಶೀಲಿಸಲಾಗಿದ್ದು, ಉನ್ನತ ಶಿಕ್ಷಣ ಇಲಾಖೆಯಿಂದ ಕರಡು ಪರಿನಿಯಮ ಅನುಮೋದನೆಗಾಗಿ ಕಳುಹಿಸಿರುವುದರಿಂದ ಯಥಾವತ್ತಾಗಿ ಪರಿನಿಯಮವನ್ನು ಅನುಮೋದಿಸುವುದು ಸೂಕ್ತವಾಗಿರುತ್ತದೆಂದು ಸಭೆಗೆ ವಿವರಿಸಿದರು.

ನಂತರ ಆನ್‌ಲೈನ್ ಮೂಲಕ ಸಭೆಯಲ್ಲಿ ಪಾಲ್ಗೊಂಡ ಶ್ರೀ ರವಿಕಿರಣ್, ಶ್ರೀ ವಿನಯ್ ಕುಮಾರ್ ಶೆಟ್ಟಿ ಪ್ರೊ. ಪದ್ಮಮ್ಮ, ಶ್ರೀಮತಿ ಗೀತಾಂಜಲಿ ಇವರುಗಳು ಮಾತನಾಡಿ ಸರ್ಕಾರದಿಂದ ಸಿದ್ಧಪಡಿಸಿರುವ ಸದರಿ ಪರಿನಿಯಮವನ್ನು ಅನುಮೋದಿಸಬಹುದೆಂದು ಅಭಿಪ್ರಾಯ ವ್ಯಕ್ತ ಪಡಿಸಿದರು. ಜೊತೆಗೆ ತುರ್ತು ಅನುಮೋದನೆ ಅಗತ್ಯದ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ ಸಭೆಯನ್ನು ಏರ್ಪಾಡು ಮಾಡಿದ್ದಕ್ಕಾಗಿ ಮಾನ್ಯ ಕುಲಸಚಿವರನ್ನು ಬಹುತೇಕ ಸದಸ್ಯರು ಅಭಿನಂದಿಸಿದರು.

ನಿರ್ಣಯ : The Statutes Relating to Appointment and Promotion of Teachers and Other Academic Staff and Measures for the Maintenance of Standards in higher Education in the Kuvempu University as per the UGC Regulations 2018 ಈ ಪರಿನಿಯಮವನ್ನು ಯಥಾವತ್ತಾಗಿ ಅನುಮೋದಿಸಲಾಯಿತು.

ಅಂತಿಮವಾಗಿ ಆನ್‌ಲೈನ್ ಮೂಲಕ ಹಾಗೂ ಸಭೆಯಲ್ಲಿ ಭಾಗವಹಿಸಿದ ಎಲ್ಲಾ ಸದಸ್ಯರುಗಳಿಗೆ, ಮಾನ್ಯ ಕುಲಸಚಿವರು ಧನ್ಯವಾದಗಳನ್ನು ತಿಳಿಸಿದರು ನಂತರ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಿ/-
ಕುಲಪತಿಗಳು

ಕುಲಸಚಿವರು
ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.